ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಗುರುವಾರ, ದಿನಾಂಕ : 24 ನೇ ಸೆಪ್ಟೆಂಬರ್, 2020

ವರಾಹಿ, ಎಡದಂಡೆ, ಏತನೀರಾವರಿ ಯೋಜನೆಯ ಅನುಷ್ಠಾನದ ವಿಳಂಬ

ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ(ನಾಮನಿರ್ದೇಶನ ಹೊಂದಿದವರು) –

491 (555) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ವಾರಾಹಿ ಎಡದಂಡೆ ಯೋಜನೆಗೆ ತಗಲುವ ಯೋಜಿತ ಅಂದಾಜು ಮೊತ್ತವೆಷ್ಟು; ಈವರೆಗೂ ಬಿಡುಗಡೆಯಾದ ಅನುದಾನವೆಷ್ಟು; ವೆಚ್ಚ ಮಾಡಲಾದ ಮೊತ್ತವೆಷ್ಟು ; ಬಿಡುಗಡೆಗೆ ಬಾಕಿಯಿರುವ ಅನುದಾನವೆಷ್ಟು;

(ಆ) ಈ ಯೋಜನೆಯು ಹಾದು ಹೋಗುವ ಗ್ರಾಮಗಳು ಯಾವುವು; ಈ ಯೋಜನೆಯು ಹೊಂದಿರುವ ಅಚ್ಚುಕಟ್ಟು ಪ್ರದೇಶದ ವಿಸ್ತೀರ್ಣವೆಷ್ಟು; ಪೂರ್ಣಗೊಂಡ ಅಚ್ಚುಕಟ್ಟು ಪ್ರದೇಶದ ವಿಸ್ತೀರ್ಣವೆಷ್ಟು; ಬಾಕಿಯಿರುವ ಅಚ್ಚುಕಟ್ಟು ಪ್ರದೇಶದ ವಿಸ್ತೀರ್ಣವೆಷ್ಟು;

(ಇ) ಈ ಯೋಜನೆಗೆ ಭೂಸ್ವಾಧೀನ ಪಡಿಸಿಕೊಂಡ ಮತ್ತು ಭೂಸ್ವಾಧೀನ ಪ್ರಕ್ರಿಯೆಗೆ ಬಾಕಿಯಿರುವ ಭೂಮಿ ಎಷ್ಟು; ವಾರಾಹಿ ಎಡದಂಡೆ ಕಾಲುವೆಯ ಕಾಮಗಾರಿಯನ್ನು ಪೂರ್ಣಗೊಳಿಸಲು ಇಲಾಖೆಯಿಂದ ಯೋಜಿಸಲಾದ ಕಾಲಮಿತಿ ಯಾವುದು;

(ಈ) ಏತ ನೀರಾವರಿ ಯೋಜನೆಗೆ ತಗಲುವ ಯೋಜಿತ ಅಂದಾಜು ಮೊತ್ತವೆಷ್ಟು; ಈವರೆಗೂ ಬಿಡುಗಡೆಯಾದ ಅನುದಾನವೆಷ್ಟು; ವೆಚ್ಚ ಮಾಡಲಾದ ಮೊತ್ತವೆಷ್ಟು; ಬಿಡುಗಡೆಗೆ ಬಾಕಿಯಿರುವ ಅನುದಾನವೆಷ್ಟು; ಈ ಯೋಜನೆಯು ಹಾದುಹೋಗುವ ಗ್ರಾಮಗಳು ಯಾವುವು;

(ಉ) ಈ ಯೋಜನೆಯು ಹೊಂದಿರುವ ಅಚ್ಚುಕಟ್ಟು ಪ್ರದೇಶದ ವಿಸ್ತೀರ್ಣವೆಷ್ಟು; ಪೂರ್ಣಗೊಂಡ ಅಚ್ಚುಕಟ್ಟು ಪ್ರದೇಶದ ವಿಸ್ತೀರ್ಣವೆಷ್ಟು; ಬಾಕಿಯಿರುವ ಅಚ್ಚುಕಟ್ಟು ಪ್ರದೇಶದ ವಿಸ್ತೀರ್ಣವೆಷ್ಟು;

(ಊ) ಯೋಜನೆಗೆ ಭೂಸ್ವಾಧೀನ ಪಡಿಸಿಕೊಂಡ ಮತ್ತು ಭೂಸ್ವಾಧೀನ ಪ್ರಕ್ರಿಯೆಗೆ ಬಾಕಿಯಿರುವ ಭೂಮಿ ಎಷ್ಟು;

(ಋ) ವಾರಾಹಿ ಏತ ನೀರಾವರಿ ಕಾಮಗಾರಿಯನ್ನು ಪೂರ್ಣಗೊಳಿಸಲು ಇಲಾಖೆಯಿಂದ ಯೋಜಿಸಲಾದ ಕಾಲಮಿತಿ ಯಾವುದು?